ಸಮಾಚಾರ ಸಣ್ಣದಲ್ಲ

11 ತಿಂಗಳ ಮಗು ಕೊಲೆ ಪ್ರಕರಣ: ತಂದೆ ಬಂಧನ

ಬೆಂಗಳೂರು: 11 ತಿಂಗಳ ಹೆಣ್ಣು ಮಗುವನ್ನು ಪೋಷಕರೇ ಕೊಲೆ ಮಾಡಿದ ಆರೋಪದಲ್ಲಿ ತಂದೆಯನ್ನು ಆವಲಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಮತ್ತೊಂದೆಡೆ ತಾವು ಈ ಹತ್ಯೆ ಮಾಡಿಲ್ಲ, ಎಂದು ಪೊಲೀಸರು ದೌರ್ಜನ್ಯವೆಸಗಿದ್ದಾರೆ ಎಂದು ತಲೆಮರೆಸಿಕೊಂಡಿರುವ ಆರೋಪಿತೆಯಾಗಿರುವ ತಾಯಿ ಅಜ್ಞಾತ ಸ್ಥಳದಿಂದ ವಿಡಿಯೊ ಹರಿಬಿಟ್ಟಿದ್ದಾರೆ. 11 ತಿಂಗಳ ಮಗುವನ್ನು ಹತ್ಯೆ ಮಾಡಿದ ಆರೋಪದಡಿ ಶೇಕರ್‌ನನ್ನು ಬಂಧಿಸಲಾಗಿದ್ದು, ಈತನ ಪತ್ನಿ ವಿಜಯಲಕ್ಷ್ಮೀ ಪ್ರಕರಣದ ಎರಡನೇ ಆರೋಪಿ ಯಾಗಿದ್ದು, ಬಂಧನ ಭೀತಿಯಿಂದ ತಲೆಮರೆಸಿ ಕೊಂಡಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಯಾದಗಿರಿ ಮೂಲದ ಈ ದಂಪತಿಗೆ ನಾಲ್ಕು ವರ್ಷದ ಹಿಂದೆ ಮದುವೆಯಾಗಿದ್ದು, ಇಬ್ಬರು ಮಕ್ಕಳಿದ್ದಾರೆ. ಎರಡನೇ ಮಗುವಾದ ರೇಣು ಕಾಳನ್ನು ಜೂನ್ 9ರಂದು ದಂಪತಿ ಮಧ್ಯೆ ನಡೆದ ಜಗಳದಲ್ಲಿ ಅಮಾನುಷವಾಗಿ ಹತ್ಯೆ ಮಾಡಿದ ಬಳಿಕ ಪೋಷಕರೇ ಮಗುವನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆತಂದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಕ್ವಾರಿ: ಎನ್‌ಎಚ್‌ಆರ್‌ಸಿ ಸ್ವಯಂಪ್ರೇರಿತ ದೂರು

ಬೆಂಗಳೂರು: ಬೆಂಗಳೂರಿನ ಕಲ್ಲು ಕ್ವಾರಿಯಲ್ಲಿ ಭಾರೀ ಗ್ರಾನೈಟ್ ಬಂಡೆ ಕುಸಿದು ಏಳು ವಲಸೆ ಕಾರ್ಮಿಕರು ಮೃತಪಟ್ಟಿದ್ದು, ಐವರು ಗಾಯಗೊಂಡಿರುವ ದುರಂತ ಪ್ರಕರಣವನ್ನು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿ ಕೊಂಡಿದೆ. ಈ ಸಂಬಂಧ ಆಯೋಗವು, ಕರ್ನಾಟಕ ಸರಕಾರದ ಮುಖ್ಯ ಕಾರ್ಯದರ್ಶಿಗೆ ನೋಟಿಸ್ ಜಾರಿಗೊಳಿಸಿ, ಘಟನೆಯ ಕುರಿತು ಸಮಗ್ರ ವರದಿಯನ್ನು ಎರಡು ವಾರದೊಳಗೆ ಸಲ್ಲಿಸುವಂತೆ ನಿರ್ದೇಶಿಸಿದೆ. ಜು.2ರಂದು ಬೆಂಗಳೂರಿನ ಕಲ್ಲುಕ್ವಾರಿಯಲ್ಲಿ ಈ ದುರಂತ ಸಂಭವಿಸಿತ್ತು. ಭಾರೀ ಗ್ರಾನೈಟ್ ಬಂಡೆ ಏಕಾಏಕಿ ಕಾರ್ಮಿಕರ ಮೇಲೆ ಉರುಳಿ ಬಿದ್ದ ಪರಿಣಾಮ ಸ್ಥಳದಲ್ಲೇ ಏಳು ಮಂದಿ ಮೃತಪಟ್ಟರೆ, ಐವರು ಗಂಭೀರವಾಗಿ ಗಾಯಗೊಂಡಿದ್ದರು. ಘಟನೆ ಸಂಭವಿಸಿದ ವೇಳೆ ಸುಮಾರು 16 ಮಂದಿ ಕಾರ್ಮಿಕರು ಕ್ವಾರಿಯಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ. ಆಯೋಗವು ತನ್ನ ನೋಟಿಸ್‌ನಲ್ಲಿ ಅಪಘಾತಕ್ಕೆ ಕಾರಣವಾದ ಅಂಶಗಳು, ಮೃತರು ಹಾಗೂ ಗಾಯಾಳುಗಳಿಗೆ ನೀಡಿರುವ ಪರಿಹಾರ, ಸರಕಾರ ಕೈಗೊಂಡಿರುವ ಕ್ರಮಗಳ ಕುರಿತು ವಿವರವಾದ ಮಾಹಿತಿ ನೀಡುವಂತೆ ರಾಜ್ಯ ಸರಕಾರಕ್ಕೆ ಸೂಚಿಸಿದೆ.

ಟೆಂಡರ್ ಗೋಲ್ಮಾಲ್ ಆರೋಪದಲ್ಲಿ ಶಾಸಕ ಸುರೇಶ್ ಕುಮಾರ್ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ | ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ತೀವ್ರ ವಾಗ್ವಾದ | ಪ್ರತಿ ಆರೋಪಕ್ಕೂ ದಾಖಲೆಗಳೊಂದಿಗೆ ಉತ್ತರ ನೀಡಲು ನಾನು ಸಿದ್ಧ ಎಂದ ಬಿಜೆಪಿ ಶಾಸಕ ಸುರೇಶ್ ಕುಮಾರ್

ಕೈಕೈ ಮಿಲಾಯಿಸಿ ಶಾಸಕರ ಕಚೇರಿ ಎದುರು ಹೈಡ್ರಾಮ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಆರ್‌ಟಿಒ ಕಚೇರಿಯಲ್ಲಿ ಸೋಮವಾರ ನಡೆದ ಜನಸಂಪರ್ಕ ಸಭೆಯ ವೇಳೆ ಬಿಜೆಪಿ ಶಾಸಕ ಎಸ್. ಸುರೇಶ್ ಕುಮಾರ್ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಟೆಂಡರ್ ಗೋಲ್ಮಾಲ್ ಆರೋಪಿಸಿ ಪ್ರತಿಭಟನೆ ನಡೆಸಿದರು. ಸಭೆ ನಡೆಯುತ್ತಿದ್ದ ಸ್ಥಳಕ್ಕೆ ನುಗ್ಗಲು ಕಾಂಗ್ರೆಸ್ ಕಾರ್ಯಕರ್ತರು ಯತ್ನಿಸಿದ ವೇಳೆ ಬಿಜೆಪಿ ಕಾರ್ಯಕರ್ತರು ಕೂಡ ಸ್ಥಳಕ್ಕೆ ಆಗಮಿಸಿದ್ದರಿಂದ ಕೆಲಕಾಲ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಯಿತು. ಪರಿಸ್ಥಿತಿ ಕೈಮೀರದಂತೆ ಪೊಲೀಸರು ಮಧ್ಯಪ್ರವೇಶಿಸಿ ಪರಿಸ್ಥಿತಿ ನಿಯಂತ್ರಿಸಿದರು.

ಕಾಂಗ್ರೆಸ್ ಕಾರ್ಯಕರ್ತರು ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಶಾಸಕರ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು. ಜನಸಂಪರ್ಕ ಸಭೆಗೆ ಆಗಮಿಸಿದ್ದ ಶಾಸಕರನ್ನು ಎದುರಿಸಿ ಪ್ರಶ್ನಿಸಲು ಹಾಗೂ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ವಾಗ್ವಾದವೂ ನಡೆಯಿತು.

ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿದ ಶಾಸಕ ಸುರೇಶ್ ಕುಮಾರ್, ಭ್ರಷ್ಟಾಚಾರದ ಆರೋಪಗಳನ್ನು ರಾಜಕೀಯ ಪ್ರಚಾರದ ಸಾಧನವನ್ನಾಗಿ ಬಳಸುವುದರಿಂದ ಯಾವುದೇ ಪ್ರಯೋಜನವಿಲ್ಲ. ಆರೋಪ ಮಾಡುವವರು ಕೇವಲ ಪೋಸ್ಟರ್, ಬ್ಯಾನರ್ ಹಿಡಿದು ಪ್ರತಿಭಟನೆ ನಡೆಸುವ ಬದಲು ತಮ್ಮ ಬಳಿ ಇರುವ ದಾಖಲೆಗಳೊಂದಿಗೆ ನ್ಯಾಯಾಲಯ ಅಥವಾ ಲೋಕಾಯುಕ್ತದ ಮೊರೆ ಹೋಗಬೇಕು. ನಿಜವಾಗಿಯೂ ಟೆಂಡರ್ ಗೋಲ್ಮಾಲ್ ನಡೆದಿದ್ದರೆ ಅದನ್ನು ಸಾಬೀತುಪಡಿಸಲು ಕಾನೂನು ಮಾರ್ಗಗಳಿವೆ. ದಾಖಲೆಗಳೊಂದಿಗೆ ದೂರು ಸಲ್ಲಿಸಿ ತನಿಖೆ ನಡೆಸಿಸಬೇಕು ಎಂದು ಸುರೇಶ್ ಕುಮಾರ್ ಪ್ರಶ್ನಿಸಿದರು.

ಯಾವುದೇ ಆರೋಪದ ಸತ್ಯಾಸತ್ಯತೆ ತನಿಖೆಯ ಮೂಲಕವೇ ನಿರ್ಧಾರವಾಗಬೇಕು. ಲೋಕಾಯುಕ್ತ, ನ್ಯಾಯಾಲಯ ಸೇರಿದಂತೆ ಕಾನೂನು ಸಂಸ್ಥೆಗಳು ತನಿಖೆ ನಡೆಸಿ ವರದಿ ನೀಡಿದ ನಂತರವೇ ತೀರ್ಮಾನಕ್ಕೆ ಬರಬೇಕು. ಅದಕ್ಕೂ ಮುನ್ನ ಬೀದಿಯಲ್ಲಿ ಪ್ರತಿಭಟನೆ ನಡೆಸಿ ಜನರಲ್ಲಿ ಗೊಂದಲ ಸೃಷ್ಟಿಸುವುದು ಸೂಕ್ತವಲ್ಲ. ಪ್ರತಿ ಸೋಮವಾರ ನಡೆಸುವ ಜನಸೇವಕ ಕಾರ್ಯಕ್ರಮದ ಉದ್ದೇಶ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲೇ ಪರಿಹಾರ ಕಲ್ಪಿಸುವುದಾಗಿದೆ. ವೃದ್ಧಾಪ್ಯ ವೇತನ, ರಸ್ತೆ, ಮರ ತೆರವು, ಮೂಲಸೌಕರ್ಯ ಸೇರಿದಂತೆ ವಿವಿಧ ಸಮಸ್ಯೆಗಳೊಂದಿಗೆ ಜನರು ದೂರದ ಊರುಗಳಿಂದ ಬರುತ್ತಾರೆ. ಇಂತಹ ಸಂದರ್ಭದಲ್ಲಿ ರಾಜಕೀಯ ಪ್ರತಿಭಟನೆ ನಡೆಸುವುದರಿಂದ ಸಮಸ್ಯೆ ಹೇಳಿಕೊಳ್ಳಲು ಬಂದ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಜನರ ಸಮಸ್ಯೆಗಳನ್ನು ಆಲಿಸುವ ಕಾರ್ಯಕ್ರಮ ಅಡ್ಡಿಪಡಿಸುವುದು ಸರಿಯಲ್ಲ. ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೆ ಕಾನೂನು ಚೌಕಟ್ಟಿನಲ್ಲಿಯೇ ಹೋರಾಟ ನಡೆಸಬೇಕು. ಯಾವುದೇ ಆರೋಪಕ್ಕೂ ತನಿಖೆ ಎದುರಿಸಲು ನಾನು ಸಿದ್ಧನಿದ್ದೇನೆ ಎಂದು ಸುರೇಶ್ ಕುಮಾರ್ ಹೇಳಿದರು.

ಶಾಸಕ ಸುರೇಶ್ ಕುಮಾರ್ ಪೋಸ್ಟರ್ ಹಿಡಿದು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಪ್ರತಿ ಆರೋಪಕ್ಕೂ ದಾಖಲೆಗಳೊಂದಿಗೆ ಉತ್ತರ ನೀಡಲು ಸಿದ್ಧ

ಕಾಂಗ್ರೆಸ್ ಸರಕಾರ ಶೇ.40 ಕಮಿಷನ್ ಆರೋಪದ ಆಧಾರದಲ್ಲಿ ಅಧಿಕಾರಕ್ಕೆ ಬಂದವರು, ಆ ಪ್ರಕರಣಗಳಲ್ಲಿ ಯಾರನ್ನಾದರೂ ಶಿಕ್ಷೆಗೆ ಗುರಿಪಡಿಸಿದ್ದಾರೆಯೇ? ಯಾರನ್ನಾದರೂ ಜೈಲಿಗೆ ಕಳುಹಿಸಿದ್ದಾರೆಯೇ? ಅದನ್ನು ಮಾಡದೆ ಈಗ ಹೊಸ ಆರೋಪಗಳನ್ನು ಮುಂದಿಟ್ಟುಕೊಂಡು ಪ್ರತಿಭಟನೆ ನಡೆಸುವುದು ರಾಜಕೀಯ ನಾಟಕವಲ್ಲದೆ ಮತ್ತೇನೂ ಅಲ್ಲ. ಕಾಂಗ್ರೆಸ್ ಲೀಗಲ್ ಸೆಲ್ ಸದಸ್ಯ ಸೂರ್ಯ ಮುಕುಂದರಾಜ್ ಅವರು ನಾಲ್ಕು ದಿನಗಳ ಹಿಂದೆ ಲೋಕಾಯುಕ್ತಕ್ಕೆ ವಿರುದ್ಧ ದೂರು ಸಲ್ಲಿಸಿದ್ದಾರೆ. ದೂರು ಸಲ್ಲಿಸಿರುವ ವಿಷಯ ತಿಳಿದ ತಕ್ಷಣವೇ ನಾನು ಪ್ರತಿಕ್ರಿಯೆ ನೀಡಿದ್ದೇನೆ. ಲೋಕಾಯುಕ್ತ ನೋಟಿಸ್ ನೀಡಿದರೆ ಅಥವಾ ತನಿಖೆ ಆರಂಭಿಸಿದರೆ ಪ್ರತಿ ಆರೋಪಕ್ಕೂ ದಾಖಲೆಗಳೊಂದಿಗೆ ಉತ್ತರ ನೀಡಲು ನಾನು ಸಂಪೂರ್ಣ ಸಿದ್ಧನಿದ್ದೇನೆ. ತನಿಖೆಯಿಂದ ಸತ್ಯ ಹೊರಬರಲಿ ಎಂದು ಶಾಸಕ ಎಸ್. ಸುರೇಶ್ ಕುಮಾರ್ ತಿಳಿಸಿದರು.

> ಯಾವುದೇ ತನಿಖೆ ಇಲ್ಲದೆ ಕೇವಲ ರಾಜಕೀಯ ಉದ್ದೇಶದಿಂದ ಪ್ರತಿಭಟನೆ ನಡೆಸುವುದು ಸರಿಯಾದ ಕ್ರಮವಲ್ಲ, ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರುವ ಮುನ್ನ ಶೇ. 40 ಕಮಿಷನ್ ಆರೋಪ ಮಾಡಿತ್ತು. ಆದರೆ ಅಧಿಕಾರಕ್ಕೆ ಬಂದು ಮೂರು ವರ್ಷಗಳಾದರೂ ಆ ಆರೋಪಗಳಿಗೆ ಸಂಬಂಧಿಸಿದಂತೆ ಒಬ್ಬರ ವಿರುದ್ಧವೂ ಕಾನೂನು ಕ್ರಮ ಕೈಗೊಂಡಿಲ್ಲ.
>
> – ಎಸ್. ಸುರೇಶ್ ಕುಮಾರ್, ಶಾಸಕ

ಅಬ್ಬಾಸ್ ಹತ್ಯೆಗೆ ಸಂಚು: ಆರೋಪಿ ಬಂಧನ

ಬೆಂಗಳೂರು: ಕೆಪಿಸಿಸಿ ಜನರಲ್ ಸೆಕ್ರೆಟರಿ ಅಬ್ಬಾಸ್ ಹತ್ಯೆಗೆ ಸ್ಕೆಚ್ ಹಾಕಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿ ಹರ್ಷನನ್ನು ಸಿಸಿಬಿ ಪೊಲೀಸರು ಯಶಸ್ವಿಯಾಗಿ ಬಂಧಿಸಿದ್ದಾರೆ.

ಬಂಧಿತನಿಂದ ಕಂಟ್ರಿಮೇಡ್ ಪಿಸ್ತೂಲ್, 8 ಜೀವಂತ ಗುಂಡು ಮತ್ತು ಪೆಪ್ಪರ್ ಸ್ಪ್ರೇ ವಶಕ್ಕೆ ಪಡೆದುಕೊಳ್ಳಲಾಗಿದೆ. ಇನ್ನು ಈತ ಈಗಾಗಲೇ ಎರಡು ಸುತ್ತು ಗುಂಡು ಹಾರಿಸಿ ಫೈರಿಂಗ್ ಪ್ರಾಕ್ಟೀಸ್ ಕೂಡ ಮಾಡಿದ್ದ ಎಂಬ ಆಘಾತಕಾರಿ ವಿಷಯ ಬೆಳಕಿಗೆ ಬಂದಿದೆ.

ಹತ್ಯೆಗೆ ಸಂಚು: ಕಳೆದ ವರ್ಷ ಅಶೋಕನಗರದ ನೀಲಸಂದ್ರದಲ್ಲಿ ರೌಡಿಶೀಟರ್ ಹೈದರ್ ಅಲಿ ಎಂಬಾತನ ಕೊಲೆಯಾಗಿತ್ತು. ಈ ಕೊಲೆಯ ಹಿಂದೆ ಅಬ್ಬಾಸ್ ಕೈವಾಡವಿದೆ ಎಂದು ಹೈದರ್ ಕುಟುಂಬಸ್ಥರು ಆರೋಪಿಸಿದ್ದರು. ಆದರೆ ಅಬ್ಬಾಸ್ ಈ ಪ್ರಕರಣದಲ್ಲಿ ಕೋರ್ಟ್‌ನಿಂದ ತಡೆಯಾಜ್ಞೆ ಪಡೆದುಕೊಂಡಿದ್ದ. ಇದರಿಂದ ಆಕ್ರೋಶಗೊಂಡಿದ್ದ ಹೈದರ್ ಅಲಿ ಸಹೋದರ ಶಬ್ಬೀರ್ ಅಲಿ, ಅಬ್ಬಾಸ್ ಹತ್ಯೆಗೆ ಸುಪಾರಿ ನೀಡಿದ್ದ. ಮೊಹರಂ ಹಬ್ಬದ ದಿನದಂದೇ ಅಬ್ಬಾಸ್ ಮನೆಗೆ ನುಗ್ಗಿ ಮಾರಕಾಸ್ತ್ರಗಳಿಂದ ಕೊಲೆ ಮಾಡಲು ಇಡೀ ಗ್ಯಾಂಗ್ ಸ್ಕೆಚ್ ಹಾಕಿತ್ತು. ಇದಕ್ಕಾಗಿ 30ಕ್ಕೂ ಹೆಚ್ಚು ಲಾಂಗ್, ಮಚ್ಚು, ಡ್ರ್ಯಾಗರ್ ಹಾಗೂ ಕಾರು, ಬೈಕ್ ಸೇರಿದಂತೆ ಸಂಚು ರೂಪಿಸಲಾಗಿತ್ತು. ಬಂಧಿತ ಆರೋಪಿ ಹರ್ಷ ಕೊಲೆಯಾಗಿರುವ ಹೈದರ್ ಆಪ್ತನಾಗಿದ್ದು, ಕೊಲೆಗೆ ಪ್ರತೀಕಾರ ತೀರಿಸಿಕೊಳ್ಳಲು ಮುಂದಾಗಿದ್ದ. ಹೀಗಾಗಿ ಇತರೆ ಆರೋಪಿಗಳೊಂದಿಗೆ ಕೈಜೋಡಿಸಿದ್ದ.

8 ಆರೋಪಿಗಳ ಸೆರೆ

ಸದ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಬಿ ಪೊಲೀಸರು ಈಗಾಗಲೇ 8 ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತರಿಂದ ಮಚ್ಚು, ಲಾಂಗ್ ವಶಕ್ಕೆ ಪಡೆಯಲಾಗಿತ್ತು. ಹೈದರ್ ಅಲಿ ಸಹೋದರ ಶಬ್ಬೀರ್ ಅಲಿ, ಅಲಿ ಅಳಿಯ ಸಾಜಿದ್, ರೌಡಿಶೀಟರ್‌ಗಳಾದ ಸುಮನ್, ಶಿವಪ್ರಸಾದ್, ಶರವಣ, ವಿನೋದ್, ಪ್ರೇಮ್ ಪೂಜಾರ್ ಮತ್ತು ಮತ್ತೊಬ್ಬ ಆರೋಪಿ ಬಂಧಿತರು. ಇದೀಗ ಹರ್ಷಾ ಸೇರಿದಂತೆ ಬಂಧಿತರ ಸಂಖ್ಯೆ ಒಂಬತ್ತಕ್ಕೆ ಏರಿಕೆ ಆಗಿದೆ.

ಇಸ್ರೋಗೆ ಮತ್ತೆ ಹುಸಿ ಬಾಂಬ್ ಸಂದೇಶ

ಬೆಂಗಳೂರು: ರಾಜಧಾನಿಯಲ್ಲಿ ಇಸ್ರೋ ಪ್ರಧಾನ ಕಚೇರಿಗೆ ಮತ್ತೆ ಹುಸಿಬಾಂಬ್ ಸಂದೇಶ ಬಂದಿದೆ. ಅಪರಿಚಿತ ದುಷ್ಕರ್ಮಿಯೊಬ್ಬ ಮೇಲ್ ಮುಖಾಂತರ ಬಾಂಬ್ ಸ್ಫೋಟಗೊಳಿಸುವುದಾಗಿ ಬೆದರಿಕೆ ಬಂದಿದ್ದು, ಈ ಸಂಬಂಧ ಸಂಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಾಲ್ಕೈದು ದಿನಗಳ ಹಿಂದೆ ಸಂಜಯ ನಗರದಲ್ಲಿರುವ ಇಸ್ರೋ ಪ್ರಧಾನ ಕಚೇರಿಗೆ ಹುಸಿ ಬಾಂಬ್ ಸಂದೇಶ ಬಂದ ಹಿನ್ನೆಲೆಯಲ್ಲಿ ತಾಂತ್ರಿಕ ಸುಳಿವು ಆಧರಿಸಿ ಉತ್ತರಪ್ರದೇಶದ ಗಾಜಿಯಾಬಾದ್ ನಲ್ಲಿ ನಿಶಾಂತ್ ತ್ಯಾಗಿ ಎಂಬಾತನನ್ನು ಬಂಧಿಸಲಾಗಿತ್ತು. ಈತನ ಬಳಿಯಿದ್ದ ಎಲೆಕ್ಟ್ರಾನಿಕ್ ಡಿವೈಸ್ ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದಾಗ ಆರೋಪಿಯು ಮಾನಸಿಕ ಆಸ್ವಸ್ಥ ಎಂಬುದು ತಿಳಿದುಬಂದಿತ್ತು. ಈ ಬೆನ್ನಲ್ಲೇ ಮತ್ತೆ ಇಸ್ರೋ ಕಚೇರಿಗೆ ಭಾನುವಾರ ರಾತ್ರಿ 9 ಗಂಟೆ ಸುಮಾರಿಗೆ ದುಷ್ಕರ್ಮಿಯು ಹುಸಿ ಬಾಂಬ್ ಸಂದೇಶ ಕಳುಹಿಸಿದ್ದಾನೆ. ಸೋಮವಾರ ಮಧ್ಯಾಹ್ನ 2 ಗಂಟೆಯೊಳಗೆ ಬಾಂಬ್ ಸ್ಫೋಟಗೊಳ್ಳಲಿದೆ ಎಂದು ಸಂದೇಶದಲ್ಲಿ ಆರೋಪಿ ಬೆದರಿಸಿದ್ದಾನೆ. ಸೋಮವಾರ ಬೆಳಗ್ಗೆ ಇದನ್ನು ನೋಡಿದ ಸಿಬ್ಬಂದಿಗಳು ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದರು. ಮುಂಜಾಗ್ರತ ಕ್ರಮವಾಗಿ ಬಾಂಬ್ ನಿಷ್ಕ್ರಿಯ ದಳ ಹಾಗೂ ಶ್ವಾನದಳ ಸ್ಥಳಕ್ಕೆ ಬಂದು ಕಚೇರಿಯಲ್ಲಿ ಶೋಧ ನಡೆಸಿದಾಗ ಅಧಿಕೃತವಾಗಿ ಇದೊಂದು ಹುಸಿ ಬಾಂಬ್ ಕರೆ ಎಂದು ಗೊತ್ತಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಒಂದು ವಾರದಲ್ಲಿ ಎರಡನೇ ಬಾರಿ ಇಸ್ರೋ ಕಚೇರಿಗೆ ಹುಸಿ ಬಾಂಬ್ ಸಂದೇಶ ಬಂದಿದ್ದರ ಹಿನ್ನೆಲೆ ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ಉದ್ದೇಶಪೂರ್ವಕವಾಗಿ ಯಾರಾದರೂ ಮಾಡುತ್ತಿದ್ದಾರಾ ಎಂಬ ಶಂಕೆ ವ್ಯಕ್ತಪಡಿಸಿದ್ದಾರೆ.

ಬೆಂಕ್ ಆಫ್ Bank of Baroda

ROSARB
ಪ್ರಾದೇಶಿಕ ಕಚೇರಿ, ಬೆಂಗಳೂರು ಉತ್ತರ
ನಂ.41/2, 4ನೇ ಮಹಡಿ, ವಿಜಯ ಟವರ್ಸ್, ಟ್ರಿನಿಟಿ ಸರ್ಕಲ್, ಎಂ ಜಿ ರಸ್ತೆ, ಬೆಂಗಳೂರು, ಕರ್ನಾಟಕ–560001.
ದೂ: 080–25011368, ಇ–ಮೇಲ್: sarben@bankofbaroda.bank.in, Web: www.bankofbaroda.com

ಸಂಕ್ಷಿಪ್ತ ವಾಹನದ ಇ–ಹರಾಜು ಸೂಚನೆ

ಚಲನಶೀಲ ಆಸ್ತಿಗಳು/ವಾಹನಗಳ ಮಾರಾಟಕ್ಕಾಗಿ ಇ–ಹರಾಜಿಗಾಗಿ ಸಾರ್ವಜನಿಕ ಸೂಚನೆ

ನಿರ್ದಿಷ್ಟವಾಗಿ ಸಾಲಗಾರರಿಗೆ ಮತ್ತು ಅಡಮಾನುದಾರರಿಗೆ/ ಜಾಮೀನುದಾರರಿಗೆ ಹಾಗೂ ಸಾರ್ವಜನಿಕರಿಗೆ ಈ ಮೂಲಕ ಸೂಚಿಸುವುದೇನೆಂದರೆ ಹೈಪೋಥಿಕೇಶನ್/ಸಾಲ ಒಪ್ಪಂದದ ಅಡಿಯಲ್ಲಿ ನೀಡಲಾದ ಅಧಿಕಾರಗಳನ್ನು ಚಲಾಯಿಸಿ, ಕೆಳಗೆ ತಿಳಿಸಲಾದ ಹೈಪೋಥಿಕೇಟೆಡ್ ಮೋಟಾರು ವಾಹನವನ್ನು ಬ್ಯಾಂಕ್ ಮರು ಸ್ವಾಧೀನಪಡಿಸಿಕೊಂಡಿದೆ/ ವಶಪಡಿಸಿಕೊಂಡಿದೆ ಮತ್ತು ವಾಹನವನ್ನು "ಎಲ್ಲಿ ಹೇಗಿದೆಯೋ ಹಾಗೇ" "ಎಲ್ಲಿ ಏನಿದೆಯೋ ಹಾಗೇ ಆಧಾರದ ಮೇಲೆ" ಮಾರಾಟ ಮಾಡಲಾಗುವುದು. ಸಾಲಗಾರರ / ಜಾಮಿನುದಾರರ /ಅಡಮಾನದಾರರ ವಾಹನ/ಟಾಕಿ ಮೊತ್ತ / ಮೀಸಲು ಬೆಲೆ / ಹರಾಜಿನ ದಿನಾಂಕ ಮತ್ತು ಸಮಯ, ಇಎಂಡಿ ಮತ್ತು ಬಿಡ್ ಗುಣಾಂಕಗಳನ್ನು ಕೆಳಗೆ ವಿವರಿಸಿದೆ.

ಕ್ರ ಸಂ	ಸಾಲಗಾರ/ ಜಾಮೀನುದಾರರ ಹೆಸರು ಮತ್ತು ವಿಳಾಸ ಸಾಲದ ಖಾತೆ ಸಂಖ್ಯೆ, ಒಟ್ಟು ಮೊತ್ತ	ವಾಹನ ಮೆಕ್ ಮತ್ತು ಮಾದರಿ ಆರ್‌ಟಿಒ ನೋಂದಣಿ ನಂ./ಎಂಜಿನ್ ನಂ./ಚಾಸಿಸ್ ನಂ.	1 ಮೀಸಲು ಬೆಲೆ, 2. ಇ.ಎಂ.ಡಿ 3. ಕನಿಷ್ಠ ಇನ್ಕ್ರಿಮೆಂಟ್ ಮೌಲ್ಯ	1. ಇ–ಹರಾಜಿನ ದಿನಾಂಕ ಇ–ಹರಾಜಿನ ಪ್ರಾರಂಭದ ಸಮಯದಿಂದ ಕೊನೆಯ ಸಮಯ 2. ಬಿಡ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ. 3.ವಾಹನ / ಚರಾಸ್ತಿ ಪರಿಶೀಲನೆ ದಿನಾಂಕ ಮತ್ತು ಸಮಯ
1	ಸಿ ಗಂಗಾಧರ್ ಸಂಖ್ಯೆ 5 ಎಲ್ಲುಮಾಡ ಲೇಔಟ್, ರಾಮಚಂದ್ರ ಪುರಂ, ಜಾಲಹಳ್ಳಿ, ಬೆಂಗಳೂರು 560013 89590600003610 ರೂ 23,74,670.04	2021/TATA ULTRA 1918 T 5L BSVI TEMP REG NO. T0422KA7311X/ MAT790213N7B03949/ 5LNGDICR21BXX504565	1. ರೂ 6,66,000/– 2. ರೂ 66,600/– 3. ರೂ 10,000/–	1. Date of e-Auction 28.07.2026 Time of E-auction - Start Time 02:00 PM to End Time 06:00 PM. 2. Last date and time of submission of Bid. 28.07.2026, 02:00 PM. 3. Inspection : With prior permission from authorised officer (All vehicles are at Bhiwadi, Rajasthan)
2	ಸುರೇಶ್ ಎಂ ನಂ 5 ಎಲ್ಲುಮಾಡ ಲೇಔಟ್, ನಳಂದ ಥಿಯೇಟರ್ ಹತ್ತಿರ, ರಾಮಚಂದ್ರ ಪುರಂ, ಜಾಲಹಳ್ಳಿ ಬೆಂಗಳೂರು–560013 89590600003605 ರೂ 26,04,679.84	2021/TATA ULTRA 1918 T 5L BSVI TEMP REG NO. T0222KA33002/MAT790213M 7K17147/5LNGDICR21KYX 520358	1. ರೂ 6,66,000/– 2. ರೂ 66,600/– 3. ರೂ 10,000/–	
3	ವಸಂತ್.ಎಸ್ ಸಂಖ್ಯೆ 63 ಸಿ ಲೇನ್, ಅಂಜನಪ್ಪ ಗಾರ್ಡನ್, ಮೈಸೂರು ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018 89590600003432 ರೂ 25,27,911.61	2021TATA ULTRA 1918 T 5L BSVI TEMP REG NO/ MAT790213M7J16050/5LNGD ICR21JYX518867	1. ರೂ 6,66,000/– 2. ರೂ 66,600/– 3. ರೂ 10,000/–	
4	ರವೀಂದ್ರ ಎ ನಂ.43, 2ನೇ ಮಹಡಿ, 4ನೇ ಕ್ರಾಸ್, ನಂದಿನಿ ಥಿಯೇಟರ